ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in/
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ4(ಇ)/ಎಸ್‌ಆರ್‌ಎಸ್/2020 ದಿನಾಂಕ: 22.07.2020.
2. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/9457/2019-20 ದಿನಾಂಕ: 20.08.2020.
3. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಆಇ 02 ಸೇನಿಸೇ 2022 ದಿನಾಂಕ: 27.01.2022.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/9457/2019-20 ಬೆಂಗಳೂರು, ದಿನಾಂಕ: 5 FEB 2022**

ರಾಜ್ಯದಲ್ಲಿ ಕೋವಿಡ್-19 ರೋಗದ ಪ್ರತಿರೋಧಕ ಲಸಿಕೆ ಚುಚ್ಚುಮದ್ದು ನೀಡಲಾಗಿರುವ ಹಿನ್ನೆಲೆಯಲ್ಲಿ ಈ ರೋಗದ ತೀವ್ರತೆಯು ಪ್ರಸ್ತುತ ಇಳಿಮುಖವಾಗಿದ್ದು, ಇದಕ್ಕೆ ತುತ್ತಾದವರು ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವ ಪ್ರಮಾಣದಲ್ಲಿಯೂ ಗಣನೀಯವಾದ ಬದಲಾವಣೆ ಆಗಿರುವುದನ್ನು ಪರಿಗಣಿಸಿ, ಕೋವಿಡ್-19 ಸಂಬಂಧ ಮುಂಜಾಗ್ರತಾ ಕ್ರಮದ ಮಾರ್ಗಸೂಚಿಯನ್ನು ಮಾರ್ಪಡಿಸಿ ಆದೇಶಿಸಿರುವುದನ್ನು ಗಮನದಲ್ಲಿಟ್ಟುಕೊಂಡು ಕೋವಿಡ್-19 ರೋಗದಿಂದ ಸೋಂಕಿತ ನೌಕರರಿಗೆ ಸಂದರ್ಭಾನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಿ ಹೊರಡಿಸಲಾಗಿರುವ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಆಇ 02 ಸೇನಿಸೇ 2022 ದಿನಾಂಕ: 27.01.2022 ನ್ನು ನಿಗಮದಲ್ಲಿ ಅಳವಡಿಸಿಕೊಳ್ಳಲಾಗಿದೆ.

ಸರ್ಕಾರದ ದಿನಾಂಕ: 27.01.2022 ರ ಸದರಿ ಅಧಿಕೃತ ಜ್ಞಾಪನದ ಪ್ರತಿಯನ್ನು ಈ ಆದೇಶಕ್ಕೆ 'ಅನುಬಂಧ' ಎಂದು ಲಗತ್ತಿಸಲಾಗಿದೆ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಮೆಮೋ**

**ಕ್ರಮಾಂಕ:ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿಸ-2/21-22/** Cys-1824 **ದಿನಾಂಕ:** 19 FEB 2022

ಕೋವಿಡ್-19 ರೋಗದಿಂದ ಸೋಂಕಿತ ನೌಕರರಿಗೆ ಸಂದರ್ಭಾನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಕುರಿತು ನಿರ್ದೇಶಕರು(ಆ ಮತ್ತು ಮಾಸಂ), ಕವಿಪ್ರನಿನಿ, ಬೆಂಗಳೂರುರವರು ಹೊರಡಿಸಿರುವ ಆದೇಶ ಪತ್ರ ಸಂಖ್ಯೆ:ಕವಿಪ್ರನಿನಿ/ಬಿ16/9457/2019-20 ದಿನಾಂಕ:05.02.2022ರ ಆದೇಶವನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.

ಪು.ತಿ.ನೋ.

- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ಮುಖ್ಯ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಪ್ರತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ ಮುಖ್ಯ ಆರ್ಥಿಕ ಸಲಹೆಗಾರರುರವರ ಗಮನಕ್ಕೆ ತರುವಂತೆ ಕೋರಿದೆ.
- ಸ-2(ಆ ಮತ್ತು ಮಾ.ಸಂ)/ಪ್ರ.ಕ.

ಆದೇಶ ಸಂಖ್ಯೆ: ಕಪಿಪ್ರನಿನಿ/ಬಿ16/9457/2019- ಬೆಂಗಳೂರು, ದಿನಾಂಕ: .0 [illegible] ರ ಅನುಬಂಧ

ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 02 ಸೇನಿಸೇ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ: 27/01/2022

## ಅಧಿಕೃತ ಜ್ಞಾಪನ

ವಿಷಯ: ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:
1. ದಿನಾಂಕ: 22/07/2020 ರ ಸಂಖ್ಯೆ: ಎಫ್‌ಡಿ 04(ಇ) ಎಸ್‌ಆರ್‌ಎಸ್ 2020 ರ ಸರ್ಕಾರಿ ಆದೇಶ.
2. ದಿನಾಂಕ: 29/08/2020 ರ ಸಂಖ್ಯೆ: ಆಇ 04(ಇ) ಸೇನಿಸೇ 2020 ರ ಸರ್ಕಾರದ ಅಧಿಕೃತ ಜ್ಞಾಪನ.
3. ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಅಧ್ಯಕ್ಷರು, ರಾಜ್ಯ ನಿರ್ವಹಣೆ ಸಮಿತಿ ಇವರ ದಿನಾಂಕ: 21/01/2022 ರ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020.

*******

ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಸೋಂಕಿತ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಕುರಿತು ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ಅನೆಕ್ಷರ್-"ಬಿ" ರಲ್ಲಿನ ನಿಯಮ 4ಕ್ಕೆ ಸೇರ್ಪಡೆಗೊಳಿಸಲಾಗಿರುತ್ತದೆ ಹಾಗೂ ಈ ಸಂಬಂಧ ಉಲ್ಲೇಖ (2) ರ ಅಧಿಕೃತ ಜ್ಞಾಪನದಲ್ಲಿ ಸ್ಪಷ್ಟೀಕರಿಸಲಾಗಿರುತ್ತದೆ.

ರಾಜ್ಯದಲ್ಲಿ ಕೋವಿಡ್-19 ರೋಗದ ಪ್ರತಿರೋಧಕ ಲಸಿಕೆ ಬಹುಮಟ್ಟಿಗೆ ನೀಡಲಾಗಿರುವ ಹಿನ್ನೆಲೆಯಲ್ಲಿ ಈ ರೋಗದ ತೀವ್ರತೆಯು ಪ್ರಸ್ತುತ ಇಳಿಮುಖವಾಗಿದ್ದು, ಇದಕ್ಕೆ ತುತ್ತಾದವರು ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವ ಪ್ರಮಾಣದಲ್ಲಿಯೂ ಗಣನೀಯವಾದ ಬದಲಾವಣೆ ಆಗಿರುವುದನ್ನು ಪರಿಗಣಿಸಿ ಉಲ್ಲೇಖ (3) ರಂತೆ ಕೋವಿಡ್-19 ಸಂಬಂಧ ಮುಂಜಾಗ್ರತಾ ಕ್ರಮದ ಮಾರ್ಗಸೂಚಿಯನ್ನು ಮಾರ್ಪಡಿಸಿ ಆದೇಶಿಸಿರುವುದನ್ನು ಗಮನದಲ್ಲಿಟ್ಟುಕೊಂಡು, ಕೋವಿಡ್-19 ರೋಗದಿಂದ ಸೋಂಕಿತ ರಾಜ್ಯ ಸರ್ಕಾರಿ ನೌಕರರಿಗೆ ಸಂದರ್ಭಾನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರವು ಈ ಕೆಳಕಂಡಂತೆ ಮಂಜೂರು ಮಾಡಬಹುದಾಗಿದೆ:

1. ಸರ್ಕಾರಿ ನೌಕರ ಅಥವಾ ಆತನ ಕುಟುಂಬದ ಸದಸ್ಯರು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ಸಂದರ್ಭದಲ್ಲಿ ಹಾಗೂ ಸರ್ಕಾರಿ ನೌಕರನು ವಾಸಿಸುವ ಪ್ರದೇಶವನ್ನು ಕಂಟೇನ್ಮೆಂಟ್ ಪ್ರದೇಶವೆಂದು ಘೋಷಿಸಿ ಸಾರ್ವಜನಿಕ ಸಂಚಾರದಲ್ಲಿ ಯಾವುದೇ ನಿರ್ಬಂಧ ವಿಧಿಸಿದ್ದಲ್ಲಿ ಅಂತಹ ಸರ್ಕಾರಿ ನೌಕರರಿಗೆ ಗರಿಷ್ಠ 7 ದಿನಗಳ (ಏಳು ದಿನಗಳು) ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬಹುದು.

2. ಸದರಿ ರಜೆಯ ಮೇಲಿರುವ ಸರ್ಕಾರಿ ನೌಕರನು ಕಚೇರಿಯ ತುರ್ತು ಕೆಲಸಗಳ ನಿರ್ವಹಣೆಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವು ದೂರವಾಣಿ, ಆನ್‌ಲೈನ್ ಮೂಲಕ ನೀಡುವ ಸೂಚನೆಗಳನ್ನು ಪಾಲಿಸುವುದಕ್ಕೆ ಬದ್ಧನಾಗಿರತಕ್ಕದ್ದು.

3. ಈ ಸೂಚನೆಗಳು ತಕ್ಷಣದಿಂದ ಅನ್ವಯವಾಗಿ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತವೆ.

(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ-ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

ಪ್ರತಿ ಇವರಿಗೆ:

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
3. ಮಹಾಲೇಖಪಾಲರು (A & E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
9. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
17. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
22. ಕಾರ್ಯಪತ್ರ/ಕಾಯ್ದಿಟ್ಟ ರಕ್ಷಾ ಕಡತ.

ಕ್ರಮ ಸಂಖ್ಯೆ:1 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ/
ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ಮೂಲಕ.